# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## ಚುಕ್ಕೆ ರಹಿತ ಪ್ರಶ್ನೆ

ದಿನಾಂಕ : 15-03-2021 ಪ್ರಶ್ನೆ ಸಂಖ್ಯೆ : 1018(1340)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಹೆಚ್. ಎಂ. ರಮೇಶ ಗೌಡ(ವಿಧಾನಸಭೆಯಿಂದ ಚುನಾಯಿತರಾದವರು)

ಉತ್ತರ ನೀಡಬೇಕಾದ ದಿನಾಂಕ : 15-03-2021

ಉತ್ತರಿಸುವ ಸಚಿವರು: ಮಾನ್ಯ ಕಾರ್ಮಿಕ ಸಚಿವರು

ವಿಷಯ : ರಾಜ್ಯದಲ್ಲಿ ಇರುವ ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರ ಕುರಿತು

(ಅ) ರಾಜ್ಯದಲ್ಲಿರುವ ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರ ಸಂಖ್ಯೆ ಎಷ್ಟು; ಯಾವ ಯಾವ ಉದ್ಯಮಗಳಲ್ಲಿ ಎಷ್ಟು ಕಾರ್ಮಿಕರು ಕೆಲಸ ಮಾಡುತ್ತಿದ್ದಾರೆ (ವಿವರ ನೀಡುವುದು) ರಾಜ್ಯದ ಯಾವ ಯಾವ ನಗರಗಳಲ್ಲಿ ಇ.ಎಸ್.ಐ. ಆಸ್ಪತ್ರೆಗಳಿವೆ; (ಅವುಗಳ ವಿವರ ನೀಡುವುದು)

(ಆ) ಸರ್ಕಾರವು ಕಾರ್ಮಿಕರಿಗೆ ನಿಗದಿಪಡಿಸಿರುವ ಮಾಸಿಕ ವೇತನ ಮತ್ತು ಇತರೆ ಭತ್ಯೆಗಳೇನು; ಕೆಲಸ ನಿರ್ವಹಿಸುವ ಸ್ಥಳದಲ್ಲಿ ಕಾರ್ಮಿಕರಿಗೆ ಅಪಘಾತವಾಗಿ ಅಂಗವಿಕಲತೆ ಅಥವಾ ಇತರೆ ಊನಗಳು ಆದಲ್ಲಿ ಇಂತಹ ಕಾರ್ಮಿಕರಿಗೆ ಸರ್ಕಾರ ಮತ್ತು ಉದ್ಯೋಗದಾತರು ನೀಡುವ ಪರಿಹಾರಗಳೇನು; (ವಿವರ ನೀಡುವುದು)

(ಇ) ಸರ್ಕಾರವು ಕಾರ್ಮಿಕರ ಶ್ರೇಯೋಭಿವೃದ್ಧಿಗಾಗಿ ಅನುಷ್ಠಾನಗೊಳಿಸಿರುವ ಯೋಜನೆಗಳು ಯಾವುವು; ಈ ಯೋಜನೆಗಳ ಮಾನದಂಡಗಳೇನು; ಈ ಯೋಜನೆಗಳಡಿ ಕಳೆದೆರಡು ವರ್ಷಗಳಲ್ಲಿ ಹಾಸನ ಜಿಲ್ಲೆಯಲ್ಲಿ ಪ್ರಯೋಜನ ಪಡೆದಿರುವ ಕಾರ್ಮಿಕರ ಸಂಖ್ಯೆ ಎಷ್ಟು? (ತಾಲ್ಲೂಕುವಾರು ಮಾಹಿತಿ ನೀಡುವುದು)